ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

28 (155) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು `ಬಿ' ಹುದ್ದೆಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಮೇಲ್ದರ್ಜೆಗೇರಿಸುವ ಉದ್ದೇಶ ಹಾಗೂ ಅಗತ್ಯತೆ ಏನು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಯಾವ ಯಾವ ವಿಧಾನಸಭೆ ಸದಸ್ಯರುಗಳ, ವಿಧಾನ ಪರಿಷತ್ ಸದಸ್ಯರುಗಳ, ಸಚಿವರುಗಳ ಮತ್ತು ಕ್ಯಾಬಿನೆಟ್ ದರ್ಜೆ ಹೊಂದಿರುವವರ ಹತ್ತಿರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಯಾವ ವೇತನ ಶ್ರೇಣಿಗೆ ಮೇಲ್ದರ್ಜೆಗೇರಿಸಲಾಗುವುದು ; ಹುದ್ದೆ ಮೇಲ್ದರ್ಜೆಗೇರಿಸಲು ಯಾವುದಾದರೂ ತೊಡಕುಗಳಿವೆಯೇ ; ಇದ್ದಲ್ಲಿ ತೊಡಕುಗಳೇನು ;

(ಉ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವರ್ಗಾವಣೆಯನ್ನು (ಶಿಕ್ಷಕರ ವರ್ಗಾವಣೆಯ ರೀತಿಯಲ್ಲಿ) ಕೌನ್ಸಿಲಿಂಗ್ ಮುಖಾಂತರ ಮಾಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)